# ಕರ್ನಾಟಕ ಸರ್ಕಾರ

ಸಂಖ್ಯೆ: ಇಪಿ 124 ಎಸ್‌ಎಲ್ ಬಿ 2026

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಡಾ|| ಬಿ.ಆರ್.ಅಂಬೇಡ್ಕರ್ ವೀಧಿ
ಬೆಂಗಳೂರು, ದಿನಾಂಕ:27.04.2026

## ಸಭಾ ಸೂಚನಾ ಪತ್ರ

2026-27ನೇ ಸಾಲಿನಲ್ಲಿ ಶಾಲಾ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ರಾಜ್ಯಾದ್ಯಂತ ದಾಖಲಾತಿ ಆಂದೋಲನ ಮತ್ತು ಇತರೆ ಪ್ರಮುಖ ವಿಷಯಗಳ ಕುರಿತಂತೆ ಚರ್ಚಿಸಲು ದಿನಾಂಕ 28.04.2026 ರಂದು ಸಂಜೆ 4.30 ಗಂಟೆಗೆ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ರವರ ಅಧ್ಯಕ್ಷತೆಯಲ್ಲಿ ಸಭೆಯನ್ನು ಆಯೋಜಿಸಲಾಗಿದೆ.

**ವಿಷಯ ಸೂಚಿ** :

1. 2026-27ನೇ ಸಾಲಿನಲ್ಲಿ ಸರ್ಕಾರಿ ಕಿರಿಯ ಪ್ರಾಥಮಿಕ, ಹಿರಿಯ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ದಾಖಲಾತಿ ಆಂದೋಲನವನ್ನು ಹಮ್ಮಿಕೊಳ್ಳುವ ಬಗ್ಗೆ.
2. ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಕಲ್ಬುರ್ಗಿ ಮತ್ತು ಧಾರವಾಡ ರವರು ತಮ್ಮ ವ್ಯಾಪ್ತಿಯ 10ನೇ ತರಗತಿಯ ಫಲಿತಾಂಶ ವಿಶ್ಲೇಶಣೆ ಪ್ರಾತ್ಯಕ್ಷಿಕೆ.
3. ಆಯುಕ್ತರು ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ರವರು ಬೆಂಗಳೂರು ಮತ್ತು ಮೈಸೂರು ವಿಭಾಗದ 10ನೇ ತರಗತಿಯ ಫಲಿತಾಂಶ ವಿಶ್ಲೇಶಣೆ ಪ್ರಾತ್ಯಕ್ಷಿಕೆ.

ತಾಲ್ಲೂಕು ಹಾಗೂ ಜಿಲ್ಲಾ ಮಟ್ಟದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಇಲಾಖಾಧಿಕಾರಿಗಳು ಈ ಕೆಳಕಂಡ Zoom Meeting Link ಲಿಂಕ್‌ನ್ನು ಬಳಸಿ, ಸಭೆಗೆ ಕಡ್ಡಾಯವಾಗಿ ಹಾಜರಾಗಲು ಸೂಚಿಸಿದೆ

**MeetingLink**:https://us02web.zoom.us/j/89496785257?pwd=MGgUW1HKSBqviVzo3rx6ZL6msRbtuD.1
**Meeting ID**: 894 9678 5257
**Passcode**: 985022

| | |
|---|---|
| ಉಪ ನಿರ್ದೇಶಕರು (ಆಡಳಿತ), ಶಾಲಾ ಶಿಕ್ಷಣ ಇಲಾಖೆ, ರವರ ಕಛೇರಿಯಿಂದ | ಉಪ ನಿರ್ದೇಶಕರು (ಆಡಳಿತ), ಶಿಕ್ಷಣಾಧಿಕಾರಿಗಳು, ವಿಷಯ ಪರಿವೀಕ್ಷಕರುಗಳು, ಶಾಲಾ ಶಿಕ್ಷಣ ಇಲಾಖೆ ಇವರುಗಳು ಉಪ ನಿರ್ದೇಶಕರು (ಆಡಳಿತ), ಶಾಲಾ ಶಿಕ್ಷಣ ಇಲಾಖೆ ರವರ ಕಛೇರಿಯಿಂದ ಸಭೆಗೆ ಹಾಜರಾಗತಕ್ಕದ್ದು. |
| ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಯಿಂದ | ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಕ್ಷೇತ್ರ ಸಂಪನ್ಮೂಲ ಸಮನ್ವಯಾಧಿಕಾರಿಗಳು (ಬಿ.ಆರ್.ಸಿ) ಮತ್ತು ಇ.ಸಿ.ಓ ರವರು ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿಯಿಂದ ಸಭೆಗೆ ಹಾಜರಾಗತಕ್ಕದ್ದು . |

ಸದರಿ ಸಭೆಯಲ್ಲಿ ರಾಜ್ಯದ ಎಲ್ಲಾ, ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಮುಖ್ಯೋಪಾಧ್ಯಾಯರು ಇದಕ್ಕಾಗಿ ಪ್ರತ್ಯೇಕವಾಗಿ ಸೃಜಿಸಲಾಗಿರುವ ಯೂ ಟ್ಯೂಬ್ ಲಿಂಕ್ ಮುಖಾಂತರ ಭಾಗವಹಿಸುವುದು

27/4/26

(ಎಸ್.ಪ್ರಕಾಶ)
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರೌಢ),
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ

**ಇವರಿಗೆ:-**

1. ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು (ಅಗತ್ಯ ಮಾಹಿತಿ/ದಾಖಲೆಗಳೊಂದಿಗೆ ಸಂಬಂಧಿಸಿದ ಅಧಿಕಾರಿಗಳ ಸಮೇತ ಹಾಜರಾಗುವುದು ಹಾಗೂ ಸಭಾ ಸಡವಳಿಯನ್ನು ಸಿದ್ಧಪಡಿಸಿ ಸರ್ಕಾರಕ್ಕೆ ಸಲ್ಲಿಸುವುದು)
2. ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಕಲಬುರುಗಿ, ಕಲಬುರುಗಿ ಜಿಲ್ಲೆ
3. ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಧಾರವಾಡ, ಧಾರವಾಡ ಜಿಲ್ಲೆ
4. ನಿರ್ದೇಶಕರು, ಪ್ರಾಥಮಿಕ ಶಿಕ್ಷಣ / ಪ್ರೌಢ ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು
5. ನಿರ್ದೇಶಕರು, ಡಿ.ಎಸ್.ಆರ್.ಟಿ ಇವರು ಯು ಟ್ಯೂಬ್ ಲಿಂಕ್ ಸೃಜಿಸಿ ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರಿಗೆ ನೀಡುವುದು.
6. ಶಾಲಾ ಶಿಕ್ಷಣ ಇಲಾಖೆಯ ಎಲ್ಲಾ ವಿಭಾಗೀಯ ಸಹ ನಿರ್ದೇಶಕರು ಜೂಮ್ ಲಿಂಕ್ ಮುಖಾಂತರ ಭಾಗವಹಿಸುವುದು.
7. ರಾಜ್ಯದ ಎಲ್ಲಾ ಜಿಲ್ಲಾ ಉಪ ನಿರ್ದೇಶಕರು (ಆಡಳಿತ), ಶಾಲಾ ಶಿಕ್ಷಣ ಇಲಾಖೆ.
8. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಶಾಲಾ ಶಿಕ್ಷಣ ಇಲಾಖೆ ಜಿಲ್ಲಾ ಉಪನಿರ್ದೇಶಕರ ಮುಖಾಂತರ
9. ಹಿರಿಯ ಸಹಾಯಕ ನಿರ್ದೇಶಕರು (ಇ-ಆಡಳಿತ), ಆಯುಕ್ತರ ಕಛೇರಿ, ಅಗತ್ಯ ಕ್ರಮಕ್ಕಾಗಿ
10. ರಾಜ್ಯದ ಎಲ್ಲಾ ಸರ್ಕಾರಿ ಪ್ರೌಢ ಶಾಲೆಗಳ ಮುಖ್ಯೋಪಾಧ್ಯರುಗಳು ಜಿಲ್ಲಾ ಉಪನಿರ್ದೇಶಕರ ಮುಖಾಂತರ
11. ರಾಜ್ಯದ ಎಲ್ಲಾ ಕ್ಷೇತ್ರ ಸಂಪನ್ಮೂಲ ಸಮನ್ವಯಾಧಿಕಾರಿಗಳು (ಬಿ.ಆರ್.ಸಿ) ಜಿಲ್ಲಾ ಉಪನಿರ್ದೇಶಕರ ಮುಖಾಂತರ

**ಪ್ರತಿ (ಮಾಹಿತಿಗಾಗಿ):**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಯವರು, ಬಹುಮಹಡಿ ಕಟ್ಟಡ, ಬೆಂಗಳೂರು
2. ಸರ್ಕಾರದ ವಿಶೇಷ ಕಾರ್ಯದರ್ಶಿ ರವರ ಆಪ್ತ ಸಹಾಯಕರು, ಬಹುಮಹಡಿ ಕಟ್ಟಡ, ಬೆಂಗಳೂರು